## ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಮ್.ಎಫ್.ಸಿ., ನ್ಯಾಯಾಲಯ.
## ಹಿರೇಕೆರೂರು.
## ಸಿ.ಸಿ.ನಂಬರ್‌ಃ 272/2020

ಸಿಡಬ್ಲ್ಯೂಃ 5

ಪಿಡಬ್ಲ್ಯೂಃ 5

| | | |
|---|---|---|
| ಸಾಕ್ಷಿಯ ಹೆಸರು | : | ರಾಮನಗೌಡ ಕಬ್ಬಕ್ಕಿ |
| ತಂದೆಯ ಹೆಸರು | : | ಸಿದ್ದಲಿಂಗಪ್ಪ ಗೌಡ |
| ವಯಸ್ಸು | : | 58 ವರ್ಷ |
| ಉದ್ಯೋಗ | : | ವ್ಯವಸಾಯ |
| ವಾಸಸ್ಥಳ | : | ಕೋಡ |

ಇಂದು ದಿನಾಂಕಃ 18.08.2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ಮಾಡಿಸಲಾಯಿತು.

**ಮುಖ್ಯ ವಿಚಾರಣೆಃ** ಮಾನ್ಯ ಎಪಿಪಿಯವರಿಂದಃ

ಚಾಸಾ-1 ರವರ ಪರಿಚಯ ನನಗೆ ಇರುವುದಿಲ್ಲ. ಚಾಸಾ-6 ನನ್ನ ತಮ್ಮ. ನಾನು ಅಪಘಾತವನ್ನು ಪ್ರತ್ಯಕ್ಷವಾಗಿ ನೋಡಿರುವುದಿಲ್ಲ, ಅಪಘಾತದ ಬಗ್ಗೆ ನನಗೆ ಯಾವುದೇ ಮಾಹಿತಿ ಇರುವುದಿಲ್ಲ. ಪೋಲಿಸರು ನನ್ನನ್ನು ವಿಚಾರಣೆ ಮಾಡಿರುವುದಿಲ್ಲ ಹಾಗೂ ಪೋಲಿಸರಿಗೆ ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ. ಈ ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇರುವುದಿಲ್ಲ.

(ಈ ಹಂತದಲ್ಲಿ ಮಾನ್ಯ ಎಪಿಪಿಯವರು ಸಾಕ್ಷಿಯನ್ನು ಅಭಿಯೋಜನೆಗೆ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಅನುಮತಿ ನೀಡಲಾಯಿತು)

**ಪಾಟೀ ಸವಾಲುಃ** ಮಾನ್ಯ ಎಪಿಪಿಯವರಿಂದಃ

ದಿನಾಂಕ 18-08-2019 ರಂದು ಮದ್ಯಾಹ್ನ 2.30 ಗಂಟೆಯ ಸುಮಾರಿಗೆ ನಾನು ಮತ್ತು ಚಾಸಾ-6 ರವರು ನಮ್ಮ ಹೊಲದಲ್ಲಿ ಕೆಲಸ ಮಾಡುತ್ತಿರುವಾಗ ಕೋಡದಿಂದ ಉಜನೀಪುರ ಗ್ರಾಮದ ಕಡೆಗೆ ಒಂದು ಮೋಟಾರ ಸೈಕಲ್ ನ್ನು ಅದರ ಚಾಲಕ ಅಜಾಗರೂಕತೆ ಮತ್ತು ನಿರ್ಲಕ್ಷತನದಿಂದ ಚಾಲನೆ ಮಾಡಿಕೊಂಡು ಬಂದು ರಸ್ತೆಯ ಪಕ್ಕದಲ್ಲಿರುವ ಗಟಾರಕ್ಕೆ ಬಿದ್ದಿರುತ್ತಾರೆ ಎಂದರೆ ಸರಿಯಲ್ಲ. ಆಗ ನಾನು ಚಾಸಾ-4 ಮತ್ತು 6 ರವರು ಆತನನ್ನು ನೋಡಿ ಎಬ್ಬಿಸಿರುತ್ತೇವೆ ಎಂದರೆ ಸರಿಯಲ್ಲ. ಸದರಿ ಅಪಘಾತದ ಪರಿಣಾಮ ಆರೋಪಿಗೆ ಎಡಗಾಲು ಮುರಿದು ನೋವಿನಿಂದ ಬಳಲುತ್ತಿದ್ದರು ಎಂದರೆ ಸರಿಯಲ್ಲ. ನಂತರ ಚಾಸಾ-1 ರವರು ಅಲ್ಲಿಗೆ ಬಂದು

ಗಾಯಾಳುವನ್ನು ಆಸ್ಪತ್ರೆಗೆ ಕರೆದುಕೊಂಡು ಹೋಗಿರುತ್ತಾರೆ ಎಂದರೆ ಸರಿಯಲ್ಲ. ಈ ಬಗ್ಗೆ ದಿನಾಂಕ 21-09-2019 ರಂದು ಹೇಳಿಕೆಯನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ. ಸದರಿ ಹೇಳಿಕೆಯನ್ನು ನಿಪಿ-5 ಎಂದು ಗುರುತಿಸಲಾಯಿತು. ಆರೋಪಿಗೆ ಸಹಾಯ ಮಾಡುವ ಸಲುವಾಗಿ ಸುಳ್ಳು ಸಾಕ್ಷ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ** ಆರೋಪಿ ಪರ ಶ್ರೀ ಪಿ ಆರ್ ಯು ವಕೀಲರಿಂದಃಇಲ್ಲಾ ಎಂದು ನುಡಿದಿರುತ್ತಾರೆ.

ಮರು ವಿಚಾರಣೆಃ ಇಲ್ಲ

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕ ಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು)

ನನ್ನ ಸಮಕ್ಷಮ

ಓ ಹೇ ಕೇ ಸರಿ ಇದೆ.

ಸಿ.ಜೆ. ಮತ್ತು ಜೆ.ಎಮ್.ಎಫ್.ಸಿ.,
ಹಿರೇಕೆರೂರು.